## ಹಿಂಬರಹ

ಸಂಖ್ಯೆ: ಡಿಟಿಇ 02 ಇಎಸ್‌ಟಿ(9) 2017 /12246 ದಿನಾಂಕ: 09-08-2017

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 22 ಸೇಸ್ಥಅ 2017 ದಿನಾಂಕ: 12-07-2017 ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್, ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

7772

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 22 ಸೇಸ್ಥಅ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 12.07.2017.

## ಸುತ್ತೋಲೆ

ವಿಷಯ: ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರನ್ವಯ ಅಧಿಸೂಚಿಸಲ್ಪಟ್ಟ ಅರ್ಹ ದಿನಗೂಲಿ ನೌಕರರಿಗೆ ನಿಯಮಬಾಹಿರವಾಗಿ ಗಳಿಕೆ ರಜೆ ನಗದೀಕರಣ ಸೌಲಭ್ಯವನ್ನು ನೀಡುತ್ತಿರುವ ಬಗ್ಗೆ.

ಉಲ್ಲೇಖ: 1. ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 77 ಶಾಸನ 2012, ದಿನಾಂಕ: 15.2.2013.
2. ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013, ದಿನಾಂಕ: 10.5.2013.
3. ಅಧಿಸೂಚನೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013, ದಿನಾಂಕ: 22.2.2014.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 24 ಸೇಸ್ಥಅ 2014, ದಿನಾಂಕ: 19.9.2014.
5. ಸರ್ಕಾರಿ ಆದೇಶ ಸಂಖ್ಯೆ: ಆಇ 5 ಸೇನಿಸೇ 2014, ದಿನಾಂಕ: 27.11.2014.

JD (Adl) / Rep (Adl)

****

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿಗೆ ಮತ್ತು ಸೇವಾವಧಿಯ ಕನಿಷ್ಠ ಭದ್ರತೆ, ಉತ್ತಮ ವೇತನ ಹಾಗೂ ಕೆಲವು ಸಾಮಾಜಿಕ ಭದ್ರತೆಯನ್ನು ಕಲ್ಪಿಸಲು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ನ್ನು ಜಾರಿಗೊಳಿಸಲಾಗಿದೆ. ಸದರಿ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ನ್ನು ಹೊರಡಿಸಲಾಗಿದೆ. ಅಧಿನಿಯಮದನ್ವಯ ಅಧಿಸೂಚಿಸಲ್ಪಟ್ಟು ಸೇವೆಯಲ್ಲಿ ಮುಂದುವರೆಸಲಾದ ಅರ್ಹ ದಿನಗೂಲಿ ನೌಕರರಿಗೆ ವೇತನ, ರಜೆ ಮತ್ತು ಇತರೆ ಸೌಲಭ್ಯಗಳನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 24 ಸೇಸ್ಥಅ 2014, ದಿನಾಂಕ: 19.09.2014ರಲ್ಲಿ ಮಂಜೂರು ಮಾಡಲಾಗಿದೆ.

ಮೇಲ್ಕಂಡ ದಿನಾಂಕ: 19.09.2014ರ ಆದೇಶದಲ್ಲಿ ಮಂಜೂರು ಮಾಡಿರುವ ಸೌಲಭ್ಯಗಳನ್ನು ಹೊರತುಪಡಿಸಿ ಇತರೆ ಯಾವುದೇ ಆರ್ಥಿಕ ಸೌಲಭ್ಯಗಳನ್ನು ನೀಡತಕ್ಕದ್ದಲ್ಲವೆಂದೂ ಆದೇಶಿಸಲಾಗಿದೆ. ಈ ಆದೇಶದಂತೆ ದಿನಗೂಲಿ ನೌಕರರು ವರ್ಷಕ್ಕೆ 30 ದಿನಗಳ ಗಳಿಕೆ ರಜೆ ಸೌಲಭ್ಯಕ್ಕೆ ಅರ್ಹರಿದ್ದು, ಸೇವೆಯಲ್ಲಿ ಮುಂದುವರೆಸಲಾಗಿರುವ ದಿನಗೂಲಿ ನೌಕರರು ತಮ್ಮ ಸೇವಾವಧಿಯಲ್ಲಿ ಈ ಗಳಿಕೆ ರಜೆಯನ್ನು ಉಪಯೋಗಿಸಿಕೊಳ್ಳಲು ಅರ್ಹರಾಗಿರುತ್ತಾರೆ. ಈ ಗಳಿಕೆ ರಜೆಯನ್ನು ಯಾವುದೇ ಸಂದರ್ಭದಲ್ಲಿ ನಗದೀಕರಿಸಿಕೊಳ್ಳಲು ಅವಕಾಶ ಇರುವುದಿಲ್ಲ.

ಆದಾಗ್ಯೂ, ಇತ್ತೀಚೆಗೆ ಕೆಲವು ಇಲಾಖೆಗಳಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಆಇ 5 ಸೇನಿಸೇ 14 ದಿನಾಂಕ: 27.11.2014ನ್ನು ಉಲ್ಲೇಖಿಸಿ ದಿನಗೂಲಿ ನೌಕರರಿಗೆ ಗಳಿಕೆ ರಜೆ ನಗದೀಕರಣ ಸೌಲಭ್ಯವನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012 ಮತ್ತು ಅದರಡಿ ರಚಿಸಲಾಗಿರುವ ನಿಯಮಗಳನ್ವಯ ದಿನಗೂಲಿ ನೌಕರರನ್ನು ಕೆಲವು ನಿರ್ದಿಷ್ಟ ಸೌಲಭ್ಯಗಳನ್ನು ನೀಡಿ ಸೇವೆಯಲ್ಲಿ ಮುಂದುವರೆಸಲಾಗಿದ್ದು, ಇವರುಗಳು ಖಾಯಂ ಸರ್ಕಾರಿ ನೌಕರರಾಗಿರುವುದಿಲ್ಲ.

2...

PS 865 1/8/17

ಆದುದರಿಂದ, ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ ಮಂಜೂರು ಮಾಡಲಾಗುವ ಗಳಿಕೆ ರಜೆ ನಗದೀಕರಣದ ಸೌಲಭ್ಯವನ್ನು ಸೇವೆಯಲ್ಲಿ ಮುಂದುವರೆದ ಅವಧಿಯಲ್ಲಾಗಲೀ ಅಥವಾ ಸೇವೆಯಿಂದ ನಿವೃತ್ತಿ ಹೊಂದಿದ ಸಂದರ್ಭದಲ್ಲಾಗಲೀ ದಿನಗೂಲಿ ನೌಕರರಿಗೆ ಮಂಜೂರು ಮಾಡಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ. ಈಗಾಗಲೇ ಗಳಿಕೆ ರಜೆ ನಗದೀಕರಣವನ್ನು ನಿಯಮಬಾಹಿರವಾಗಿ ಮಂಜೂರು ಮಾಡಿರುವ ಪ್ರಕರಣಗಳಲ್ಲಿ, ಮಂಜೂರು ಮಾಡಿ ಹೊರಡಿಸಿರುವ ಆದೇಶವನ್ನು ತಕ್ಷಣವೇ ರದ್ದುಪಡಿಸುವಂತೆ ಮತ್ತು ಪಾವತಿಸಿರುವ ಆರ್ಥಿಕ ಸೌಲಭ್ಯವನ್ನು ಅಂತಹ ದಿನಗೂಲಿ ನೌಕರರಿಂದ ವಸೂಲಿ ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ. ಈ ಸೂಚನೆಗಳನ್ನು ಎಲ್ಲಾ ಸಕ್ಷಮ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

Gayathri M R
13/04/17

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ಎಲ್ಲಾ ಇಲಾಖಾ ಮುಖ್ಯಸ್ಥರು/ ಪ್ರಾದೇಶಿಕ ಆಯುಕ್ತರು/ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
9. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
11. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
13. ಸಚಿವಾಲಯದ ಎಲ್ಲಾ ಶಾಖೆಗಳು.
14. ವಾರದ ರಾಜ್ಯಪತ್ರ.
15. ಶಾಖಾ ರಕ್ಷಾ ಕಡತ/ಜಿಡಿ ಪ್ರತಿಗಳು.

**(*ಮುಖಪತ್ರದೊಂದಿಗೆ)**